# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 898 |
| ಸದಸ್ಯರ ಹೆಸರು | : | ಶ್ರೀ ಹೆಚ್.ಎಂ ರಮೇಶ ಗೌಡ |
| ಉತ್ತರಿಸುವ ದಿನಾಂಕ | : | 10.03.2021. |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯಾದ್ಯಂತ ಕಳೆದೆರೆಡು ವರ್ಷಗಳಿಂದ ಸಮಾಜ ಕಲ್ಯಾಣ ಇಲಾಖೆಯಡಿ ನಡೆಸಲಾದ ಕಾರ್ಯಕ್ರಮಗಳಿಗೆ ಬಿಡುಗಡೆಯಾದ ಅನುದಾನವೆಷ್ಟು; ಖರ್ಚಾದ ಹಣವೆಷ್ಟು; (ಮಾಹಿತಿ ನೀಡುವುದು) | ಸಮಾಜ ಕಲ್ಯಾಣ ಇಲಾಖೆಯಡಿ ಕಳೆದೆರೆಡು ವರ್ಷಗಳಲ್ಲಿ ವಿವಿಧ ಕಾರ್ಯಕ್ರಮಗಳಡಿ ಬಿಡುಗಡೆಯಾದ ಅನುದಾನ ಮತ್ತು ಖರ್ಚಾದ ಅನುದಾನದ ವಿವರಗಳು ಈ ಕೆಳಗಿನಂತಿದೆ. (see tables below) |

**ಪರಿಶಿಷ್ಟ ಜಾತಿಯವರ ಕಲ್ಯಾಣಕ್ಕಾಗಿ**

(ರೂ.ಲಕ್ಷಗಳಲ್ಲಿ)

| ವರ್ಷ | ಬಿಡುಗಡೆಯಾದ ಅನುದಾನ | ಖರ್ಚಾದ ಅನುದಾನ |
|---|---|---|
| 2018-19 | 517302.74 | 516158.55 |
| 2019-20 | 418857.83 | 413959.62 |

**ಪರಿಶಿಷ್ಟ ವರ್ಗಗಳ ಕಲ್ಯಾಣಕ್ಕಾಗಿ**

(ರೂ.ಲಕ್ಷಗಳಲ್ಲಿ)

| ವರ್ಷ | ಬಿಡುಗಡೆಯಾದ ಅನುದಾನ | ಖರ್ಚಾದ ಅನುದಾನ |
|---|---|---|
| 2018-19 | 167128.86 | 163513.81 |
| 2019-20 | 131814.17 | 128154.23 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಆ) | ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು ಗ್ರಾಮೀಣ ಭಾಗದ ಯುವಕ ಯುವತಿಯರಿಗೆ ವಿಶೇಷ ಯೋಜನೆಗಳು ಮತ್ತು ರಚನಾತ್ಮಕ ಕಾರ್ಯಕ್ರಮಗಳ ತರಬೇತಿ ನೀಡುತ್ತಾರೆಯೇ; | ಹೌದು. |
| ಇ) | ಕೆಲವು ಜಿಲ್ಲೆಗಳಲ್ಲಿ ಸಮಾಜ ಕಲ್ಯಾಣ ಇಲಾಖೆ ಅತ್ಯಂತ ನಿಷ್ಕ್ರಿಯವಾಗಿದೆ' ಎನ್ನುವ ದೂರುಗಳು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿಲ್ಲ. |
| ಈ) | ಸಮಾಜ ಕಲ್ಯಾಣ ಇಲಾಖೆಯಡಿ ಸಾಮಾಜಿಕ ಅಭಿವೃದ್ಧಿಗೆ ಯಾವ ಯೋಜನೆ ರೂಪಿಸಲಾಗಿದೆ? (ವಿವರ ನೀಡುವುದು) | ಅನುಬಂಧ-1ರಲ್ಲಿ ಒದಗಿಸಲಾಗಿದೆ. |

ಸಂಖ್ಯೆ: ಸಕಇ 38 ಆರ್&ಐ 2021

(ಬಿ.ಶ್ರೀರಾಮುಲು)
ಸಮಾಜ ಕಲ್ಯಾಣ ಸಚಿವರು.

# ಅನುಬಂಧ-1

ಸಮಾಜ ಕಲ್ಯಾಣ ಇಲಾಖೆಯಡಿ ಸಾಮಾಜಿಕ ಅಭಿವೃದ್ಧಿಗೆ ಈ ಕೆಳಕಂಡ ಯೋಜನೆಗಳನ್ನು ರೂಪಿಸಲಾಗಿದೆ.

- **ಪರಿಶಿಷ್ಟ ಜಾತಿಯವರಿಗಾಗಿ ರೂಪಿಸಲಾದ ಯೋಜನೆಗಳು:-**

1. ಅಂತರ್ಜಾತಿ ವಿವಾಹ
2. ಸರಳ ವಿವಾಹ
3. ಒಳಪಂಗಡಗಳ ಅಂತರ್ಜಾತಿ ವಿವಾಹ
4. ವಿಧವಾ ಮರು ವಿವಾಹ
5. ದೇವದಾಸಿ ಮಕ್ಕಳ ವಿವಾಹ

ಮುಂತಾದ ಕಾರ್ಯಕ್ರಮಗಳಿಗೆ ಪ್ರೋತ್ಸಾಹಧನ ಹಾಗೂ ಅಸ್ಪೃಶ್ಯತೆಯ ನಿವಾರಣೆಗಾಗಿ ಅರಿವು ಮೂಡಿಸುವ ಮುಂತಾದ ಕಾರ್ಯಕ್ರಮಗಳನ್ನು ಜಾರಿಗೊಳಿಸಲಾಗುತ್ತಿದೆ.

- **ಪರಿಶಿಷ್ಟ ಪಂಗಡದವರಿಗಾಗಿ ರೂಪಿಸಲಾದ ಯೋಜನೆಗಳು:-**

1) **ಸರಳ ವಿವಾಹ:** ಪರಿಶಿಷ್ಟ ಪಂಗಡದವರ ಅಭಿವೃದ್ಧಿಗಾಗಿ ಇಲಾಖಾ ಆದ್ಯತಾ ಕಾರ್ಯಕ್ರಮವಾದ ಸಾಮೂಹಿಕ ಸರಳ ಕಾರ್ಯಕ್ರಮದಡಿ ಪರಿಶಿಷ್ಟ ಪಂಗಡದ ದಂಪತಿಗಳು ಸಾಮೂಹಿಕ ಸರಳ ವಿವಾಹಗಳಲ್ಲಿ ಸರಳವಾಗಿ ವಿವಾಹ ಮಾಡಿಕೊಂಡ ದಂಪತಿಗಳಿಗೆ ರೂ.50,000/- ಪ್ರೋತ್ಸಾಹಧನವನ್ನು ನೀಡಲಾಗುತ್ತಿದೆ.

2) **ವಿಧವಾ ವಿವಾಹ:** ಈ ಕಾರ್ಯಕ್ರಮದಡಿ ಪರಿಶಿಷ್ಟ ಪಂಗಡದ ವಿಧವೆಯರು ಮರು ವಿವಾಹವಾದ್ದಲ್ಲಿ ಅಂತಹವರಿಗೆ ರೂ.3.00 ಲಕ್ಷಗಳ ಪ್ರೋತ್ಸಾಹಧನ ನೀಡಲಾಗುತ್ತಿದೆ.

3) **ಒಳ ಪಂಗಡ ವಿವಾಹ:** ಪರಿಶಿಷ್ಟ ಪಂಗಡದ ಯುವಕ/ಯುವತಿಯರು ಪರಿಶಿಷ್ಟ ಪಂಗಡದ ಒಳಗೆ ಅಂತರ್ಜಾತಿ ವಿವಾಹವಾದ್ದಲ್ಲಿ ಅಂತಹವರಿಗೆ ರೂ.2.00 ಲಕ್ಷಗಳ ಪ್ರೋತ್ಸಾಹಧನವನ್ನು ನೀಡಲಾಗುತ್ತಿದೆ.

4) **ಅಂತರ್ಜಾತಿ ವಿವಾಹ:-** ಪರಿಶಿಷ್ಟ ಪಂಗಡದ ಯುವಕ ಯುವತಿಯರು ಅನ್ಯಜಾತಿಯ ಯುವಕ/ಯುವತಿಯನ್ನು ವಿವಾಹವಾದಲ್ಲಿ ಅಂತಹ ಪುರುಷರಿಗೆ ರೂ.2.50 ಲಕ್ಷ ಮತ್ತು ಮಹಿಳೆಯರಿಗೆ ರೂ.3.00 ಲಕ್ಷಗಳ ಪ್ರೋತ್ಸಾಹಧನ ನೀಡಲಾಗುವುದು.

- **ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮಗಳಿಂದ ಸಫಾಯಿ ಕರ್ಮಚಾರಿ ಮತ್ತು ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಅಭಿವೃದ್ಧಿ ಮತ್ತು ಪುನರ್ ವಸತಿಗಾಗಿ ರೂಪಿಸಲಾದ ಯೋಜನೆಗಳು:-**

1. ಜೀವನ್ ಸುರಕ್ಷಾ ವಿಮಾ ಯೋಜನೆ.
2. ಆರೋಗ್ಯ ಜಾಗೃತಿ ಮೂಡಿಸಲು ಆರೋಗ್ಯ ಶಿಬಿರಗಳು.
3. ಮೂಲಭೂತ ಸೌಕರ್ಯಗಳು.
4. ಇತ್ಯಾದಿ ಅಭಿವೃದ್ಧಿ ಯೋಜನೆಗಳು.

****